ಅನುಬಂಧ – 'ಎ'

ಕ್ರ. ಸಂ.	ಖಾಸಗಿ ಮೆಡಿಕಲ್ ಕಾಲೇಜುಗಳ ಹೆಸರು	ಸರ್ಕಾರಿ ಆಸ್ಪತ್ರೆಗಳ ವಿವರ – ಇಲ್ಲಿ ಖಾಸಗಿ ಮೆಡಿಕಲ್ ಕಾಲೇಜುಗಳವರು ಕ್ಲಿನಿಕಲ್ ಸೌಲಭ್ಯ ಪಡೆಯುತ್ತಿರುವ ವಿವರ
1.	ಕಸ್ತೂರಬಾ ಮೆಡಿಕಲ್ ಕಾಲೇಜು, ಮಂಗಳೂರು	– 1. ಜಿಲ್ಲಾ ಆಸ್ಪತ್ರೆ, ಮಂಗಳೂರು 2. ಲೇಡಿ ಗೋಪನ್ ಆಸ್ಪತ್ರೆ, ಮಂಗಳೂರು – 3 ಟಿ.ಬಿ. ಆಸ್ಪತ್ರೆ ಮೂಡಶೆಡ್ಡೆ
2.	ಎಂ.ಆರ್. ಮೆಡಿಕಲ್ ಕಾಲೇಜು, ಗುಲ್ಬರ್ಗಾ	ಜಿಲ್ಲಾ ಆಸ್ಪತ್ರೆಗಳು ಗುಲ್ಬರ್ಗಾ
3.	ಜೆ.ಎನ್. ಮೆಡಿಕಲ್ ಕಾಲೇಜು, ಬೆಳಗಾಂ	– 1. ಜಿಲ್ಲಾ ಆಸ್ಪತ್ರೆ, ಬೆಳಗಾಂ
4.	ಜೆ.ಜೆ.ಎಂ. ಮೆಡಿಕಲ್ ಕಾಲೇಜು, ದಾವಣಗೆರೆ	– 1. ಜಿಲ್ಲಾ ಆಸ್ಪತ್ರೆ, ದಾವಣಗೆರೆ 2. ಹೆಂಗಸರು ಮತ್ತು ಮಕ್ಕಳ ಆಸ್ಪತ್ರೆ, ಡಾವಣಗೆರೆ, 3. ಟಿ.ಬಿ. ಆಸ್ಪತ್ರೆ, ದಾವಣಗೆರೆ
5.	ಕೆಂಪೇಗೌಡ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಂಗಳೂರು	– 1. ಜಯನಗರ ಜನರಲ್ ಆಸ್ಪತ್ರೆ, ಬೆಂಗಳೂರು
6.	ಅಲ್‌ಅಮೀನ್ ಮೆಡಿಕಲ್ ಕಾಲೇಜು, ಬಿಜಾಪುರ	– 1. ಜನರಲ್ ಆಸ್ಪತ್ರೆ, ಬಿಜಾಪುರ.
7.	ಜೆ.ಎಸ್.ಎಸ್. ಮೆಡಿಕಲ್ ಕಾಲೇಜು, ಮೈಸೂರು	– 1. ಪಿ.ಕೆ.ಟಿ.ಬಿ. ಆಸ್ಪತ್ರೆ, ಮೈಸೂರು.
8.	ಶ್ರೀ ಸಿದ್ಧಾರ್ಥ ಮೆಡಿಕಲ್ ಕಾಲೇಜು, ತುಮಕೂರು	– 1. ಜಿಲ್ಲಾ ಆಸ್ಪತ್ರೆ, ತುಮಕೂರು
9.	ಆದಿಚುಂಚನಗಿರಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಳ್ಳೂರು	– 1. ಜಿಲ್ಲಾ ಆಸ್ಪತ್ರೆ, ಮಂಡ್ಯ
10.	ಶ್ರೀ ದೇವರಾಜ ಅರಸ್ ವೈದ್ಯಕೀಯ ಕಾಲೇಜು, ಕೋಲಾರ	– 1. ಎಸ್.ಎನ್.ಆರ್. ಆಸ್ಪತ್ರೆ, ಕೋಲಾರ 2. ಸಿವಿಲ್ ಆಸ್ಪತ್ರೆ, ಕೋಲಾರ, 3. ಕೆ.ಎನ್.ಟಿ.ಬಿ. ಆಸ್ಪತ್ರೆ, ಕೋಲಾರ.
11.	ಡಾ: ಅಂಬೇಡ್ಕರ್ ಮೆಡಿಕಲ್ ಕಾಲೇಜು, ಬೆಂಗಳೂರು	– 1. ಕೆ.ಸಿ.ಜಿ. ಆಸ್ಪತ್ರೆ, ಬೆಂಗಳೂರು.

ರಾಜ್ಯದಲ್ಲಿರುವ ಪಶು ಚಿಕಿತ್ಸಾಲಯಗಳ ವಿವರ

2098: ಶ್ರೀ. ಎಂ.ಕೆ. ಪಟ್ಟಣ ಶೆಟ್ಟಿ (ಬಾದಾಮಿ):–

ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಿನಾಂಕ 1–4–89 ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಜಿಲ್ಲಾ ಪರಿಷತ್‌ಗಳಿಂದ ಮಂಜೂರಾದ ಪಶು ಚಿಕಿತ್ಸಾಲಯಗಳು ಎಷ್ಟು;

ಆ) ಅವುಗಳಲ್ಲಿ ಸರ್ಕಾರದಿಂದ ಮಾನ್ಯತೆ ಪಡೆದ ಪಶು ಚಿಕಿತ್ಸಾಲಯಗಳು ಎಷ್ಟು;

ಇ) ಮಾನ್ಯತೆ ಪಡೆಯದೆ ಇರುವ ಪಶು ಚಿಕಿತ್ಸಾಲಯಗಳ ಬಗೆಗೆ ಸರಕಾರವು ಕೈಕೊಂಡ ಕ್ರಮವೇನು ?

ಶ್ರೀ ಕೆ.ಎನ್. ನಾಗೇಗೌಡ (ಪಶುಸಂಗೋಪನಾ ರಾಜ್ಯ ಸಚಿವರು):–

ಅ) 378

ಆ) 45

ಇ) ಸಕ್ರಮಗೊಳಿಸಲು ಆಲೋಚಿಸಲಾಗುವುದು.

ವಲಯ ಅರಣ್ಯ ಅಧಿಕಾರಿಗಳಿಂದ ಸರಕಾರಕ್ಕೆ ಬರತಕ್ಕ ಅನಂಗೀಕೃತ ಹಣದ ವಿವರ

2100: ಶ್ರೀ ಎಂ.ಕೆ. ಪಟ್ಟಣಶೆಟ್ಟಿ (ಬಾದಾಮಿ):–

ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) 1980 ರಿಂದ ವಲಯ ಅರಣ್ಯ ಅಧಿಕಾರಿಗಳಿಂದ ಸರ್ಕಾರಕ್ಕೆ ಬರತಕ್ಕ ಅನಂಗೀಕೃತ ಹಣ ಎಷ್ಟು;

ಆ) ವಸೂಲಿಗೆ ಸರ್ಕಾರದವರು ಕೈಗೊಂಡಿರುವ ಕ್ರಮವೇನು;

ಇ) ತೆಗದುಕೊಂಡಿರದಿದ್ದ ಪಕ್ಷದಲ್ಲಿ ತೆಗೆದುಕೊಳ್ಳುವ ಕ್ರಮವೇನು ?

ಶ್ರೀ ಎಂ.ಪಿ. ಕೇಶವಮೂರ್ತಿ (ಅರಣ್ಯ ರಾಜ್ಯಸಚಿವರು):–

ಅ) ರೂ. 82.84 ಲಕ್ಷಗಳು.

ಆ) ಕರ್ನಾಟಕ ಅರಣ್ಯ ಲೆಕ್ಕ ಸಂಹಿತೆ ನಿಯಮಾವಳಿಗಳ ಮೇರೆಗೆ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಅನಂಗೀಕೃತ ಹಣವನ್ನು ವಸೂಲಿ ಮಾಡಲು ಹಾಗೂ ಶಿಸ್ತಿನ ಕ್ರಮ ತೆಗೆದುಕೊಳ್ಳಲು ಪ್ರಾಧಿಕಾರ ಹೊಂದಿರುತ್ತಾರೆ. ಈ ಅಧಿಕಾರಿಗಳು ವಸೂಲು ಮಾಡುವ ಆದೇಶವನ್ನು ಹೊರಡಿಸಿದಾಗ ಅನೇಕ ಪ್ರಕರಣಗಳಲ್ಲಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಈ ಆದೇಶಕ್ಕೆ ತಡೆಯಾಜ್ಞೆ ನೀಡಿ, ಇಲಾಖೆಯ ವಿಚಾರಣೆಯನ್ನು ನಡೆಸಿ ಮುಂದಿನ ಕ್ರಮವನ್ನು ತೆಗೆದುಕೊಳ್ಳಲು ಸೂಚಿಸಿರುತ್ತದೆ.

ಆದರಂತೆ 47 ಜನ ವಲಯ ಅರಣ್ಯ ಅಧಿಕಾರಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ವಿರುದ್ಧ ದೋಷಾರೋಪಣಾ ಪಟ್ಟಿಗಳನ್ನು ಕೆಲವು ಘಟಕಾಧಿಕಾರಿಗಳು ಸಲ್ಲಿಸಿದ್ದು ಅವುಗಳನ್ನು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ. ಆದರ ಪ್ರಗತಿಯು ವಿವಿಧ ಹಂತಗಳಲ್ಲಿರುತ್ತದೆ. ಇನ್ನುಳಿದ ವಲಯ ಅರಣ್ಯಾಧಿಕಾರಿಗಳ: ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ವಿರುದ್ಧ ಕೂಡಲೇ ದೋಷಾರೋಪಣಾ ಪಟ್ಟಿಗಳನ್ನು ತಯಾರಿಸಲು ಎಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಮತ್ತು ಇತರೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಇದಲ್ಲದೆ ಅನಂಗೀಕೃತ ಹಣವನ್ನು ವಸೂಲ್ಮಾಡಲು ಇಲಾಖೆಯ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. .